All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

# ಪ್ರದೇಶ ಸಮಾಚಾರ

28.01.2025 2.30 P.M.

<><><><>

ಮುಖ್ಯಾಂಶಗಳು

- ದೇವದಾಸಿ ಪದ್ಧತಿ ನಿಷೇಧಿಸದ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ವಿರುದ್ಧ ಕ್ರಮ – ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ
- ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಪತ್ನಿ ಹಾಗೂ ತಮ್ಮ ಪಾತ್ರವಿಲ್ಲ ; ನಗರಾಭಿವೃದ್ಧಿ ಸಚಿವ ಬಿ. ಸುರೇಶ್ ಸ್ಪಷ್ಟನೆ
- ಶ್ರೀಹರಿ ಕೋಟಾದಲ್ಲಿ ಇಸ್ರೋದ ೧೦೦ನೇ ಉಪಗ್ರಹ ಉಡ್ಡಯನಕ್ಕೆ ಕ್ಷಣಗಣನೆ
- ಡೆಹ್ರಾಡೂನ್‌ನಲ್ಲಿಂದು ೩೮ನೇ ರಾಷ್ಟ್ರೀಯ ಕ್ರೀಡಾಕೂಟಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

<><><><>

ದೇವದಾಸಿ ಪದ್ಧತಿ ರಾಜ್ಯದಲ್ಲಿ ನಿಷೇಧ ಆಗಿದ್ದು ಎಲ್ಲಿಯಾದರೂ ನಡೆದದ್ದು ಗಮನಕ್ಕೆ ಬಂದರೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಎಚ್ಚರಿಕೆ ನೀಡಿದ್ದಾರೆ. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು ಎಲ್ಲಾ ಇಲಾಖೆಗಳೂ ಬಡ್ತಿಯಲ್ಲಿ ಮೀಸಲಾತಿಯನ್ನು ಚಾಚೂ ತಪ್ಪದೆ ಪಾಲಿಸಬೇಕು ಎಂದು ಸೂಚಿಸಿದ್ದಾರೆ. ಪರಿಶಿಷ್ಟ ಸಮುದಾಯದವರಿಗೆ ಅವಕಾಶ ತಪ್ಪಿಸಲು ಅಧಿಕಾರಿಗಳು ಕುಟಿಲ ನೀತಿ ಅನುಸರಿಸಿದರೆ ಸಹಿಸಲ್ಲ ಎಂದು ತಿಳಿಸಿದ್ದಾರೆ. ಇದೇ ವೇಳೆ ಅರಣ್ಯ ಹಕ್ಕು ಕಾಯ್ದೆ ಅಡಿಯಲ್ಲಿ ಹಕ್ಕು ಪತ್ರ ಸಮರ್ಪಕವಾಗಿ ನೀಡಬೇಕು. ಯಾವುದೇ ಕಾರಣಕ್ಕೂ ಅರಣ್ಯವಾಸಿಗಳನ್ನು ಕಾಡಿನಿಂದ ಹೊರಗೆ ಹಾಕಬಾರದು ಎಂದು ಹೇಳಿದ್ದಾರೆ. ದೌರ್ಜನ್ಯ ಪ್ರಕರಣಗಳಲ್ಲಿ ೬೦ ದಿನಗಳ ಒಳಗೆ ಆರೋಪಪಟ್ಟಿ ದಾಖಲಿಸಲೇಬೇಕು. ಯಾರಾದರೂ ನ್ಯಾಯಾಲಯದಿಂದ ತಡೆಯಾಜ್ಞೆ ತಂದರೆ ಅಡ್ವೊಕೇಟ್ ಜನರಲ್ ಜೊತೆ ಚರ್ಚಿಸಿ ತಡೆಯಾಜ್ಞೆ ತೆರವುಗೊಳಿಸಬೇಕು ಎಂದು ಮುಖ್ಯಮಂತ್ರಿ ಸ್ಪಷ್ಟ ಸೂಚನೆ ನೀಡಿದ್ದಾರೆ.

<><><><>

ಮುಡಾ ಪ್ರಕರಣದಲ್ಲಿ ತಮ್ಮದಾಗಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರ ಪಾತ್ರವಿಲ್ಲ ಎಂದು ನಗರಾಭಿವೃದ್ಧಿ ಸಚಿವ ಬಿ. ಸುರೇಶ್ ಪುನರುಚ್ಚರಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ, ನ್ಯಾಯಾಂಗ ಮತ್ತು ಸಂವಿಧಾನದ ಮೇಲೆ ಸಂಪೂರ್ಣ ನಂಬಿಕೆ ಹೊಂದಿದೆ ಎಂದು ತಿಳಿಸಿದ್ದಾರೆ. ನ್ಯಾಯಾಲಯದ ಆದೇಶಗಳನ್ನು ಪಾಲಿಸುವುದಾಗಿ ಇದೇ ವೇಳೆ ಸ್ಪಷ್ಟಪಡಿಸಿದ್ದಾರೆ. ಇಡಿ ನೋಟಿಸ್ ಬಂದಾಗ ತಾವು ನಗರಾಭಿವೃದ್ಧಿ ಸಚಿವಾಲಯದ ಉಸ್ತುವಾರಿಯಲ್ಲಿ ಇರಲಿಲ್ಲ. ಯಾವುದೇ ನಿವೇಶನಗಳನ್ನು ಹಂಚಿಕೆ ಮಾಡಿಲ್ಲ ಹಾಗೂ ಸ್ವಾಧೀನ ಪಡಿಸಿಕೊಂಡಿಲ್ಲ ಎಂದು ಹೇಳಿದ್ದಾರೆ.

<><><><>

ಆಂಧ್ರಪ್ರದೇಶದ ಶ್ರೀಹರಿಕೋಟಾದ ಸತೀಶ್‌ಧವನ್ ಬಾಹ್ಯಾಕಾಶ ಕೇಂದ್ರದಿಂದ ಇಸ್ರೋ ವತಿಯಿಂದ ಚಾರಿತ್ರಿಕ ೧೦೦ನೇ ಉಪಗ್ರಹ ಉಡ್ಡಯನಕ್ಕೆ ಕ್ಷಣಗಣನೆ ಆರಂಭವಾಗಿದೆ. ಜಿಯೋಸಿಂಕ್ರೋನಸ್ ಭೂಕೇಂದ್ರಿತ ಉಪಗ್ರಹ ಉಡ್ಡಯನ ವಾಹನ ರಾಕೆಟ್‌ನಲ್ಲಿ ಎನ್‌ವಿಎಸ್-೨ ದಿಕ್ಸೂಚಿ ಉಪಗ್ರಹವನ್ನು ನಾಳೆ ಮುಂಜಾನೆ ಉಡ್ಡಯನ ಮಾಡಲಾಗುವುದು ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ತಿಳಿಸಿದೆ. ಇದು

ಜಿಎಸ್‌ಎಲ್‌ವಿ ರಾಕೆಟ್‌ನ ೧೫ನೇ ಹಾರಾಟವಾಗಿದೆ. ಹೆಚ್ಚಿನ ಮಾಹಿತಿಯನ್ನ ಇಸ್ರೋ ಅಂತರ್ಜಾಲದಲ್ಲಿ ಪಡೆಯಬಹುದು. ಇದರ ನೇರ ಪ್ರಸಾರವನ್ನು ಇಸ್ರೋ ಯುಟ್ಯೂಬ್ ವಾಹಿನಿ ಮೂಲಕ ವೀಕ್ಷಿಸಬಹುದಾಗಿದೆ.

<><><><>

ರಾಮನಗರ ಜಿಲ್ಲೆಯಲ್ಲಿ ಇಂದು ಆನೆ ಮತ್ತು ಮಾನವ ಸಂಘರ್ಷ ಕುರಿತು ರಾಮನಗರ ಜಿಲ್ಲಾಧಿಕಾರಿ ಕಛೇರಿಯಲ್ಲಿ ಅರಣ್ಯ ಸಚಿವ ಈಶ್ವರ ಖಂಡ್ರೆ ನೇತೃತ್ವದಲ್ಲಿ ಸಭೆ ನಡೆಯಿತು. ಸಭೆಯಲ್ಲಿ ಆನೆ ದಾಳಿ ಹಾಗೂ ತಡೆ ಕುರಿತಂತೆ ಪ್ರಮುಖವಾಗಿ ಚರ್ಚಿಸಲಾಯಿತು. ಸಭೆಯಲ್ಲಿ ಶಾಸಕ ಸಿ.ಪಿ. ಯೋಗೇಶ್ವರ್, ಶಾಸಕ ಇಕ್ಬಾಲ್ ಹುಸೇನ್, ಬಗರ್ ಹುಕ್ಕುಂ ಸಾಗುವಳಿ ಅಧ್ಯಕ್ಷ ಡಿ.ಕೆ.ಸುರೇಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

<><><><>

ಬೆಳಗಾವಿಯ ಇಬ್ಬರ ಉದ್ಯಮಿಗಳ ಮನೆ ಹಾಗೂ ಕಚೇರಿಗಳ ಮೇಲೆ ಇಂದು ಆದಾಯ ಇಲಾಖೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ವಿನೋದ್ ದೊಡ್ಡಣ್ಣವರ, ಪುಷ್ಪದಂತ ದೊಡ್ಡಣ್ಣವರ ಮನೆ, ಕಚೇರಿಗಳ ಮೇಲೆ ಗೋವಾ, ಬೆಂಗಳೂರು ಅಧಿಕಾರಿಗಳಿಂದ ದಾಳಿ ನಡೆದಿದೆ. ದೊಡ್ಡಣ್ಣವರ ಕುಟುಂಬ ಸಕ್ಕರೆ ಕಾರ್ಖಾನೆ, ಗಣಿ ಹಾಗೂ ಗ್ರಾನೈಟ್ ಉದ್ಯಮ ಹೊಂದಿದೆ. ಕಾಗವಾಡ ತಾಲೂಕಿನಲ್ಲಿ ಎರಡು ಸಕ್ಕರೆ ಕಾರ್ಖಾನೆ ಹೊಂದಿರುವ ಈ ಕುಟುಂಬ ಟಿಳಕವಾಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನೆಲೆಸಿದೆ.

<><><><>

ಹುಟ್ಟು ಕಿವುಡುತನದಿಂದ ಬಳಲುವ ಮಕ್ಕಳಿಗೆ ಕಾಕ್ಲಿಯರ್ ಇಂಪ್ಲಾಂಟ್ ಶಸ್ತ್ರಚಿಕಿತ್ಸೆ ವರದಾನವಾಗಿದ್ದು, ಇದರಿಂದ ಬಡ ಮತ್ತು ಕೂಲಿಕಾರ್ಮಿಕರ ಮಕ್ಕಳಿಗೆ ಸಾಕಷ್ಟು ಅನುಕೂಲವಾಗಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ್ ತಿಳಿಸಿದ್ದಾರೆ. ವಿಜಯಪುರದ ಖಾಸಗಿ ಆಸ್ಪತ್ರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಧ್ವನಿ ಆಲಿಸುವ ತಂತ್ರಜ್ಞಾನದ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ಕಾಕ್ಲಿಯರ್ ಇಂಪ್ಲಾಂಟ್ ಶಸ್ತ್ರಚಿಕಿತ್ಸೆಗೆ ಸುಮಾರು ೭ ಲಕ್ಷದ ೫೦ ಸಾವಿರ ರೂಪಾಯಿಂದ ೧೫ ಲಕ್ಷದ ವರೆಗೆ ವೆಚ್ಚ ತಗಲುತ್ತದೆ. ಸರಕಾರದ ಯೋಜನೆಯಡಿ ಈ ಸೌಲಭ್ಯವನ್ನು ಪಡೆಯಲು ಬಿ.ಎಲ್.ಡಿ.ಈ ಆಸ್ಪತ್ರೆಯಲ್ಲಿ ಅವಕಾಶವಿದೆ ಎಂದು ಹೇಳಿದ್ದಾರೆ. ಹುಟ್ಟು ಕಿವುಡುತನ ಸಮಸ್ಯೆ ಎದುರಿಸುತ್ತಿರುವ ಮಕ್ಕಳು ಈ ಸೌಲಭ್ಯದ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

<><><><>

ಮಡಿಕೇರಿಯ ರೋಶನಾರದಲ್ಲಿರುವ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಅವರ ಸಮಾಧಿ ಸ್ಥಳದಲ್ಲಿಂದು ಕಾರ್ಯಪ್ಪ ಅವರ ೧೨೬ನೇ ವರ್ಷದ ಜನ್ಮದಿನಾಚರಣೆಯನ್ನು ಆಚರಿಸಲಾಯಿತು. ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಅವರ ಪುತ್ರ ನಿವೃತ್ತ ಏರ್ ಮಾರ್ಷಲ್ ನಂದಾ ಕಾರ್ಯಪ್ಪ, ನಿವೃತ್ತ ಕರ್ನಲ್ ಕುಮಾರ್, ಸೇರಿದಂತೆ ಗಣ್ಯರು ಕಾರ್ಯಪ್ಪ ಅವರ ಸಮಾಧಿ ಸ್ಥಳಕ್ಕೆ ಪುಷ್ಪಾರ್ಚನೆ ಮೂಲಕ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ಏರ್ ಮಾರ್ಷಲ್ ನಂದಾ ಕಾರ್ಯಪ್ಪ, ತಂದೆಗೆ ದೇಶವೇ ಸದಾ ಮೊದಲಾಗಿತ್ತು ಕುಟುಂಬ, ಗೆಳೆಯರು ನಂತರದ ಸ್ಥಾನದಲ್ಲಿದ್ದರು. ಅವರು ಸೇನಾ ಜೀವನದಲ್ಲಿ ತೋರಿದ ಪ್ರಮಾಣಿಕತೆ, ಶಿಸ್ತಿನ ಗುಣಗಳೇ ಪ್ರತೀಯೋರ್ವ ಭಾರತೀಯನಿಗೂ ಮಾರ್ಗದರ್ಶನವಾಗಬೇಕು ಎಂದು ತಿಳಿಸಿದರು. ಕೊಡಗು ವಿದ್ಯಾಲಯದ ವಿದ್ಯಾರ್ಥಿಗಳು ಕಾರ್ಯಪ್ಪ ಅವರಿಗೆ ಪ್ರಿಯವಾಗಿದ್ದ ದೇಶಭಕ್ತಿಗೀತೆ, ಭಜನೆಗಳನ್ನು ಹಾಡುವ ಮೂಲಕ ಗೌರವ ನಮನ ಸಲ್ಲಿಸಿದರು.

<><><><>

ಹುಬ್ಬಳ್ಳಿ ಧಾರವಾಡ ಅವಳಿ ನಗರ ವೇಗವಾಗಿ ಬೆಳೆಯುತ್ತಿರುವುದರಿಂದ ರೈಲ್ವೆ ಸಂಪರ್ಕ ಅತಿ ಅವಶ್ಯವಾಗಿದ್ದು, ಈ ಬಾರಿಯ ಆಯ-ವ್ಯಯದಲ್ಲಿ ಹುಬ್ಬಳ್ಳಿ - ಬೆಳಗಾವಿ ರೈಲ್ವೆ ಯೋಜನೆ, ಹುಬ್ಬಳ್ಳಿ-ಅಂಕೋಲಾ ಯೋಜನೆ ಪೂರ್ಣಗೊಳಿಸಬೇಕು ಎಂದು ಹುಬ್ಬಳ್ಳಿ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಗೌರವ ಕಾರ್ಯದರ್ಶಿ ರವೀಂದ್ರ

ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಪ್ರತ್ಯೇಕ ಕಾರಿಡಾರ್ ನಿರ್ಮಿಸಬೇಕು, ಜವಳಿ ಪಾರ್ಕ್ ನಿರ್ಮಾಣ ಮಾಡಲು ಅನುದಾನ ಬಿಡುಗಡೆಗೊಳಿಸಬೇಕು ಎಂದು ಅವರು, ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

<><><><>

ಚಿಕ್ಕಮಕ್ಕಳಿಗೆ ಆರಂಭದಿಂದಲೇ ಉತ್ತಮ ಶಿಕ್ಷಣ ನೀಡಬೇಕೆಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ಗದಗ ನಗರದಲ್ಲಿ ಎರಡು ಕೋಟಿ ರೂಪಾಯಿಗಳ ವೆಚ್ಚದಲ್ಲಿ ನೂತನವಾಗಿ ನಿರ್ಮಿಸುತ್ತಿರುವ ನಾಲ್ಕು ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಅವರು, ಮಾತನಾಡಿದರು. ಅಂಗನವಾಡಿ ಕಟ್ಟಡಗಳು ಸುಸಜ್ಜಿತವಾಗಿ ನಿಗದಿತ ಕಾಲಾವಧಿಯಲ್ಲಿ ಪೂರ್ಣಗೊಳ್ಳಬೇಕು ಎಂದು ಸೂಚಿಸಿದ್ದಾರೆ. ಕಳಪೆ ಕಾಮಗಾರಿಗೆ ಅವಕಾಶವಿಲ್ಲದಂತೆ ಸ್ಥಳೀಯ ಜನಪ್ರತಿನಿಧಿಗಳು ನಿಗಾ ವಹಿಸಬೇಕು ಎಂದು ತಿಳಿಸಿದ್ದಾರೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಡೆಹ್ರಾಡೂನ್‌ನಲ್ಲಿ ೩೮ನೇ ರಾಷ್ಟ್ರೀಯ ಕ್ರೀಡಾಕೂಟ ಉದ್ಘಾಟಿಸಲಿದ್ದಾರೆ. ಇಂದಿನಿಂದ ಫೆಬ್ರವರಿ ೧೪ರವರೆಗೆ ಉತ್ತರಾಖಂಡದ ೮ ಜಿಲ್ಲೆಗಳ ೧೧ ನಗರಗಳಲ್ಲಿ ಈ ಕ್ರೀಡಾಕೂಟ ನಡೆಯಲಿದೆ. ಉತ್ತರಾಖಂಡದ ರಜತ ಮಹೋತ್ಸವದ ಸಂದರ್ಭದಲ್ಲಿ ಈ ರಾಷ್ಟ್ರೀಯ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಿದೆ. ೩೬ ರಾಜ್ಯ, ಕೇಂದ್ರಾಡಳಿತ ಪ್ರದೇಶಗಳ ತಂಡಗಳು ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸಲಿವೆ. ಈ ಕ್ರೀಡಾಕೂಟದಲ್ಲಿ ೧೦ ಸಾವಿರಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ೧೭ ದಿನಗಳ ಕಾಲ ೩೫ ಕ್ರೀಡಾ ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯಲಿವೆ. ಯೋಗ ಮತ್ತು ಮಲ್ಲಕಂಬವನ್ನು ಮೊದಲ ಬಾರಿಗೆ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಸೇರಿಸಲಾಗಿದೆ. ಕ್ರೀಡಾಕೂಟದಲ್ಲಿ ಇಂದು ಶೂಟಿಂಗ್, ಬ್ಯಾಡ್ಮಿಂಟನ್, ಖೋ-ಖೋ, ವುಷು, ಬೀಚ್ ಹ್ಯಾಂಡ್‌ಬಾಲ್, ವಿಭಾಗದಲ್ಲಿ ಲೀಗ್ ಹಂತದ ಪಂದ್ಯಗಳು ನಡೆಯಲಿವೆ. ಇಂದು ನಡೆದ ಮಹಿಳಾ ಬಾಸ್ಕೆಟ್ ಬಾಲ್ ಪಂದ್ಯ ಒಂದರಲ್ಲಿ -ಪಂಜಾಬ್ ಉತ್ತರಾಖಂಡ ತಂಡವನ್ನು ೯೬-೫೪ ಅಂಕಗಳಿಂದ ಮಣಿಸಿದೆ. ಮತ್ತೊಂದು ಪಂದ್ಯದಲ್ಲಿ ದೆಹಲಿ ತಂಡ-ಚತ್ತೀಸ್‌ಗಢ ತಂಡವನ್ನು ೭೬-೭೫ ಅಂಕಗಳಿಂದ ಪರಾಭವಗೊಳಿಸಿದೆ.

<><><><>

ಸಂಕ್ಷಿಪ್ತ ಸುದ್ದಿಗಳು

- ಜನತಾದರ್ಶನದಲ್ಲಿ ಕೇವಲ ಸಾರ್ವಜನಿಕರ ಅಹವಾಲು ಕೇಳುವುದು ಮಾತ್ರವಲ್ಲದೇ ಆದಷ್ಟು ಶೀಘ್ರವಾಗಿ ಪರಿಹಾರ ಒದಗಿಸುವ ಕ್ರಮವನ್ನು ಕೈಗೊಂಡು ನಾಗರೀಕರಿಗೆ ಭರವಸೆ ಮೂಡಿಸಲಾಗುವುದು ಎಂದು ವಸತಿ ಖಾತೆ ಸಚಿವ ಜಮೀರ್ ಅಹ್ಮದ್‌ಖಾನ್ ತಿಳಿಸಿದ್ದಾರೆ.
- ಸಾರ್ವಜನಿಕರ ಕುಂದುಕೊರತೆ, ಸಮಸ್ಯೆಗಳ ಅರ್ಜಿಗಳನ್ನು ನಿಗದಿತ ಕಾಲಮಿತಿಯೊಳಗೆ ವಿಲೇವಾರಿ ಮಾಡಲು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಹಾಗೂ ಸಾರ್ವಜನಿಕರು ನೀಡಿದ ಅರ್ಜಿಗಳನ್ನು ಅಧೀನ ಸಿಬ್ಬಂದಿ ಇತ್ಯರ್ಥಪಡಿಸಿ ಸ್ಪಂದಿಸಿದ್ದಾರೆ ಎಂಬುದರ ಬಗ್ಗೆ ನಿಗಾ ಇಡಬೇಕು ಎಂದು ಅಧಿಕಾರಿಗಳಿಗೆ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>